ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಕೋವಿಡ್ ಸಂಕಷ್ಟದಲ್ಲಿ ವಲಸೆ ಕಾರ್ಮಿಕರ ಪರಿಸ್ಥಿತಿ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು) :-

838 (873) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೋವಿಡ್ ಸಂಕಷ್ಟ ಕಾಲದಲ್ಲಿ ವಲಸೆ ಕೂಲಿ ಕಾರ್ಮಿಕರು ಮತ್ತು ಅಸಂಘಟಿತ ಕೂಲಿ ಕಾರ್ಮಿಕರ ದಾರುಣ ಪರಿಸ್ಥಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಕಾರ್ಮಿಕರ ಶಾಶ್ವತ ಕಲ್ಯಾಣಕ್ಕಾಗಿ ಯಾವ ಯಾವ ಯೋಜನೆ ರೂಪಿಸಲಾಗುವುದು;

(ಇ) ಕಾರ್ಮಿಕ ಕಲ್ಯಾಣ ನಿಧಿಗೆ ಕಳೆದೆರಡು ವರ್ಷಗಳಿಂದ ಎಷ್ಟು ಹಣ ಸಂಗ್ರಹವಾಗಿದೆ ಹಾಗೂ ಯಾವ ಯಾವ ಯೋಜನೆಗಳಿಗೆ ಬಳಕೆಯಾಗಿದೆ; (ವಿವರ ನೀಡುವುದು)

(ಈ) ರಾಜ್ಯಾದ್ಯಂತ ಕೂಲಿ ಕಾರ್ಮಿಕರು ಕೋವಿಡ್ ನಂತರದ ದಿನಗಳಲ್ಲಿ ಆರ್ಥಿಕ ಸಂಕಷ್ಟದಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದಕ್ಕೆ ಪರಿಹಾರವೇನು?